ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	::	1005
ಸದಸ್ಯರ ಹೆಸರು	::	ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ:	::	10.03.2021
ಉತ್ತರಿಸುವ ಸಚಿವರು	::	ಕಂದಾಯ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ದಾವಣಗೆರೆ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಸೇರಿದ ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ, ಶಾಮನೂರು ಗ್ರಾಮದ ಸರ್ವೆ ನಂ.97 ರಲ್ಲಿ 4.31 ಎಕರೆ ಜಮೀನನ್ನು ಜಿಲ್ಲಾ ಮಟ್ಟದ ಅಧಿಕಾರಿಗಳ ವಸತಿ ಗೃಹ ನಿರ್ಮಾಣಕ್ಕಾಗಿ ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ ಇವರು ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುವುದು ನಿಜವೇ;	ಹೌದು
ಆ)	ಸಲ್ಲಿಸಿದ್ದಲ್ಲಿ, ಈ ಸಂಬಂಧ ತೆಗೆದುಕೊಂಡ ಕ್ರಮಗಳೇನು;	ಸರ್ಕಾರದ ಪತ್ರ ಸಂಖ್ಯೆ: ಕಂಇ 46 ಎಲ್‌ಜಿಸಿ 2020, ದಿನಾಂಕ: 06.01.2021 ರಂತೆ ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕು, ಕಸಬಾ ಹೋಬಳಿ, ಶಾಮನೂರು ಗ್ರಾಮದ ಸ.ನಂ.97ರಲ್ಲಿ 4-31 ಎಕರೆ ಜಮೀನನ್ನು ಜಿಲ್ಲಾ ಮಟ್ಟದ ಅಧಿಕಾರಿಗಳಾದ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಪೊಲೀಸ್ ಉಪಮಹಾನಿರ್ದೇಶಕರು ಇವರುಗಳ ವಸತಿ ಗೃಹದ ಉದ್ದೇಶಕ್ಕಾಗಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ.71ರಡಿ ಕಾಯ್ದಿರಿಸಲು ಸರ್ಕಾರದ ಪೂರ್ವಾನುಮೋದನೆ ನೀಡಲಾಗಿರುತ್ತದೆ.
ಇ)	ಮಾನ್ಯ ಉಚ್ಛ ನ್ಯಾಯಾಲಯವು ಈ ಹಿಂದೆ ಸದರಿ ವಿಶ್ವವಿದ್ಯಾಲಯಕ್ಕೆ ಸೇರಿದ ಜಮೀನನ್ನು ಮಂಜೂರು ಮಾಡದಂತೆ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ ಇವರು ದಿನಾಂಕ: 27.07.2020ರ ಪತ್ರದಲ್ಲಿ ದಾವಣಗೆರೆ ತಾಲ್ಲೂಕು, ಕಸಬಾ ಹೋಬಳಿ, ಶಾಮನೂರು ಗ್ರಾಮದ ಸ.ನಂ.97ರಲ್ಲಿ 4-31 ಎಕರೆ ಜಮೀನನ್ನು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ವಸತಿ ಗೃಹಕ್ಕಾಗಿ ಕಾಯ್ದಿರಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ್ದು, ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಪಿಟಿಷನ್ ಸಂ:35726/1998 ರ ಆದೇಶ ದಿನಾಂಕ:06.08.1999 ಹಾಗೂ ರಿಟ್ ಅಪೀಲ್ ಸಂ:7329/1999 ರ ಆದೇಶ ದಿನಾಂಕ:01.02.2000 ಗಳನ್ನು ಜಿಲ್ಲಾಧಿಕಾರಿಗಳ ಪ್ರಸ್ತಾವನೆಯಲ್ಲಿ ತಿಳಿಸದ ಕಾರಣ ಜಿಲ್ಲಾಧಿಕಾರಿಗಳ ವರದಿಯಂತೆ ದಾವಣಗೆರೆ ತಾಲ್ಲೂಕು, ಕಸಬಾ ಹೋಬಳಿ, ಶಾಮನೂರು ಗ್ರಾಮದ ಸ.ನಂ.97ರಲ್ಲಿ 4-31 ಎಕರೆ ಜಮೀನನ್ನು ಜಿಲ್ಲಾ ಮಟ್ಟದ ಅಧಿಕಾರಿಗಳ ವಸತಿ ಗೃಹ ನಿರ್ಮಾಣಕ್ಕಾಗಿ ಕಾಯ್ದಿರಿಸಿ, ಅನುಮೋದನೆ ನೀಡಲಾಗಿದೆ. ಮಾನ್ಯ ಉಚ್ಛ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಪ್ರಕರಣವನ್ನು ಪುನರ್ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು.
ಈ)	ಹಾಗಿದ್ದರೂ, ಮತ್ತೊಮ್ಮೆ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುವುದರ ಔಚಿತ್ಯವೇನು? (ಸಂಪೂರ್ಣ ವಿವರ ನೀಡುವುದು)	

ಸಂಖ್ಯೆ: ಆರ್‌ಡಿ 19 ಎಲ್‌ಜಿಸಿ 2021

(ಆರ್.ಅಶೋಕ್)
ಕಂದಾಯ ಸಚಿವರು